## ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.

ಸಿ.ಸಿ. ನಂಃ 359/2015 ಸಿಡಬ್ಲ್ಯೂ: 3 ಪಿಡಬ್ಲ್ಯೂ: 5

ಪ್ರಮಾಣವಚನ ಬೋಧಿಸಲಾಯಿತು ದಿಃ 06-03-2026

ಹೆಸರು : ಶಿವಶರಣಪ್ಪ

ತಂದೆ ಹೆಸರು : ನಾಗಪ್ಪ

ವಯಸ್ಸು : 73 ವರ್ಷ

ಉದ್ಯೋಗ : ಒಕ್ಕಲುತನ

ವಾಸಸ್ಥಳ : ಸೇಡಂ

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ಚಾಸಾ 2 ರವರು ನನಗೆ ಪರಿಚಯವಿಲ್ಲ. ನ್ಯಾಯಾಲಯದ ಮುಂದೆ ಇರುವ ಆರೋಪಿತರು ನನಗೆ ಗೊತ್ತಿಲ್ಲ.

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ರೀತಿಯ ಮಾಹಿತಿ ಇರುವುದಿಲ್ಲ. ಪೋಲೀಸರು ನಮ್ಮ ಸಮಕ್ಷಮ ಯಾವುದೇ ರೀತಿಯ ಪಂಚನಾಮೆಗಳು ಮಾಡಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಗುನ್ನೆ ಸ್ಥಳದ ಪಂಚನಾಮೆ ಆಗಿದ್ದು, ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುವುದರಿಂದ ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಸಾಕ್ಷಿಗೆ ಇನೊಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಜಪ್ತಿ ಪಂಚನಾಮೆ ಆಗಿದ್ದು, ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುತ್ತಾರೆ ಅದನ್ನು ಈಗಾಗಲೇ ನಿಪಿ-10 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-10(ಬಿ) ಎಂದು ಗುರುತಿಸಲಾಯಿತು. ಆದರೇ ನಿಪಿ-4 ಮತ್ತು 10 ರಲ್ಲಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ಪಾಟೀಸವಾಲುಃ** ಮಾನ್ಯ ಸ.ಸ.ಅ ರವರಿಂದ:

ದಿಃ 25-05-2014 ರಂದು ಬೆಳಿಗ್ಗೆ 10-30 ರಿಂದ 11-30 ಗಂಟೆಯ ವರೆಗೆ ನನ್ನ ಹಾಗೂ ಚಾ ಸಾ 2 ರವರ ಸಮಕ್ಷಮ ಚಾ ಸಾ 26 ರವರು ಪಂಚನಾಮೆ ಮಾಡಿ ಸ್ಥಳದಿಂದ ಒಂದು ಮೋಟಾರು ಸೈಕಲ್ ಚೆಸ್ಸಿ ನಂ. MD2A14AZ4EWL08955 ನೇದ್ದನ್ನು ವಶ ಪಡಿಸಿಕೊಂಡಿದ್ದರು ಎಂದರೆ ಸರಿಯಿಲ್ಲ. ಅದೇ ರೀತಿ ದಿಃ 30-05-2014 ರಂದು ಸಾಯಂಕಾಲ 04-00 ರಿಂದ 05-00 ಗಂಟೆಯ ವರೆಗೆ ಸೇಡಂ ವೃತ್ತ ಕಛೇರಿಯಲ್ಲಿ ನನ್ನ ಹಾಗೂ ಚಾ ಸಾ 2 ರವರ ಸಮಕ್ಷಮ ಚಾ ಸಾ 26 ರವರು ಪಂಚನಾಮೆ ಮಾಡಿ ಒಂದು ಟಾಟಾ ಮಿನಿ ಗೂಡ್ಸ ನಂ. MH-10-Z-0585 ನೇದ್ದನ್ನು ವಶ ಪಡಿಸಿಕೊಂಡಿದ್ದರು ಎಂದರೆ ಸರಿಯಿಲ್ಲ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದ: ವಕೀಲರು ಪಾಟೀಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**